ಅ-72-(41)

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ರವರು
ನಿಯಮ 72 ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ:

*********

**ಪ್ರಶ್ನೆ:**ನಾಡೋಜ ಡಾ:ಹೆಚ್.ಎನ್.ನರಸಿಂಹಯ್ಯನವರು ಸ್ಥಾಪಿಸಿದ್ದ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿಗೆ 1980ರಿಂದ ವೇತನ ಹಾಗೂ ಇತರೆ ಅನುದಾನವನ್ನು ಸರ್ಕಾರವು ನೀಡುತ್ತಿದ್ದು, 2018ರಿಂದ ವೇತನಾನುದಾನವನ್ನು ಸ್ಥಗಿತಗೊಳಿಸಿ, ಕೇವಲ ವೈಜ್ಞಾನಿಕ ಚಟುವಟಿಕೆಗಳಿಗೆ ಸೀಮಿತವಾಗಿ ಅನುದಾನ ನೀಡುತ್ತಿರುವುದರಿಂದ, ಸಂಸ್ಥೆ ಮತ್ತು ಸಿಬ್ಬಂದಿಗೆ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು

**ಉತ್ತರ:**ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು ರಾಜ್ಯಾದ್ಯಂತ ವಿವಿಧ ಸಂಸ್ಥೆಗಳಿಗೆ ವೈಜ್ಞಾನಿಕ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಅನುದಾನ ಬಿಡುಗಡೆ ಮಾಡುತ್ತಿದ್ದು, ಅದರಂತೆ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿಗೂ ಸಹ 2017-18ನೇ ಸಾಲಿನವರೆಗೆ ವೈಜ್ಞಾನಿಕ ಕಾರ್ಯಕ್ರಮಗಳ ಆಯೋಜನೆಗೆ ಮತ್ತು ಆಡಳಿತಾತ್ಮಕ ವೆಚ್ಚಗಳಿಗಾಗಿ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.

ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ಒಂದು ಸರ್ಕಾರೇತರ ಸಂಸ್ಥೆಯಾಗಿರುವುದರಿಂದ, ಸದರಿ ಸಂಸ್ಥೆಗೆ ಸರ್ಕಾರ ನೇರವಾಗಿ ಸಿಬ್ಬಂದಿ ವೇತನ ಮತ್ತು ಆಡಳಿತ ವೆಚ್ಚಕ್ಕಾಗಿ ಹಣ ಬಿಡುಗಡೆ ಮಾಡುವುದು ಸಮಂಜಸವಲ್ಲವಾಗಿರುವುದರಿಂದ, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಯೋಜನೆಗಳಿಗೆ ಮಾತ್ರ ಅನುದಾನವನ್ನು ಬಿಡುಗಡೆ ಮಾಡಲು 2017ರ ವರ್ಷದಲ್ಲಿ ನಿರ್ಧಾರ ತೆಗೆದುಕೊಳ್ಳಲಾಗಿದೆ. ಅಲ್ಲದೆ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿಗೆ ಅನುದಾನ ಬಿಡುಗಡೆ ಮಾಡುವ ಮೊದಲು ಪ್ರಸ್ತಾವನೆಯ ಉಪಯುಕ್ತತೆ ಮತ್ತು ಅಗತ್ಯತೆಯ ಬಗ್ಗೆ ಪರಿಶೀಲಿಸಿ ಪರಿಷತ್ತಿನ ಆಯ್ದ ಪ್ರಮುಖ ವಿಜ್ಞಾನ ಕಾರ್ಯಕ್ರಮಗಳಿಗೆ ಮಾತ್ರ ಲಭ್ಯತೆಯನುಸಾರ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.

ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ಒಂದು ಸರ್ಕಾರೇತರ ಸಂಸ್ಥೆಯಾಗಿರುವುದರಿಂದ, ಸದರಿ ಸಂಸ್ಥೆಯು ಸಂಪೂರ್ಣವಾಗಿ ಸರ್ಕಾರದ ಅನುದಾನವನ್ನೇ ಅವಲಂಬಿಸದೆ ಇತರೆ ಮೂಲಗಳಿಂದ ಸಂಪನ್ಮೂಲಗಳನ್ನು ಕ್ರೋಢೀಕರಿಸಿ ಸಂಸ್ಥೆಯನ್ನು ಮುನ್ನಡೆಸಬೇಕಾಗಿರುತ್ತದೆ.

**ಐಟಿಬಿಟಿ 291 ಎಸ್‌ಟಿಎಸ್ 2021**

**(ಡಾ|| ಅಶ್ವಥ್ ನಾರಾಯಣ ಸಿ. ಎನ್)**
ಉನ್ನತ ಶಿಕ್ಷಣ, ವಿದ್ಯುನ್ಮಾನ,
ಮಾಹಿತಿ ತಂತ್ರಜ್ಞಾನ,ಜೈವಿಕ ತಂತ್ರಜ್ಞಾನ
ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ
ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ
ಮತ್ತು ಜೀವನೋಪಾಯ ಸಚಿವರು